# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 105 |
| ಸದಸ್ಯರ ಹೆಸರು | : | ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ. |
| ಉತ್ತರಿಸುವ ದಿನಾಂಕ | : | 13.12.2018 |
| ಉತ್ತರಿಸುವ ಸಚಿವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2017-18ನೇ ಸಾಲಿನಲ್ಲಿ ರಾಜ್ಯದಲ್ಲಿ ಅಂಗವಿಕಲ / ವಿಕಲಚೇತನ ಹೊಂದಿರುವ ಮಕ್ಕಳನ್ನು ಗುರುತಿಸಲಾಗಿದೆಯೇ; ಎಷ್ಟು ಮಕ್ಕಳನ್ನು ಗುರುತಿಸಲಾಗಿದೆ; (ಮಾಹಿತಿ ನೀಡುವುದು) | 2011ರ ಜನಗಣತಿಯ ಪ್ರಕಾರ ಕರ್ನಾಟಕ ರಾಜ್ಯದಲ್ಲಿ 13.24 ಲಕ್ಷ ವಿವಿಧ ಸ್ವರೂಪದ ವಿಕಲತೆಯನ್ನು ಹೊಂದಿರುವ ವಿಕಲಚೇತನರಿದ್ದು, ಇವರಲ್ಲಿ 0-18 ವರ್ಷದೊಳಗಿನ ಮಕ್ಕಳು 3,89,383 ಇರುತ್ತಾರೆ. ಈ ಸಾಲಿನಲ್ಲಿ ವಿಕಲಚೇತನರ ಸಮೀಕ್ಷೆ ನಡೆಸಲಾಗುವುದು. |
| ಆ | ಅಂಗವಿಕಲ / ವಿಕಲಚೇತನ ಹೊಂದಿರುವ ಮಕ್ಕಳನ್ನು ಮುಖ್ಯ ವಾಹಿನಿಗೆ ತಂದು ಶಿಕ್ಷಣ ನೀಡಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; | ಅನುಬಂಧ – 01ರಲ್ಲಿ ನೀಡಲಾಗಿದೆ. |
| ಇ | ಅಂತಹ ಮಕ್ಕಳನ್ನು ಶಾಲೆಗೆ ದಾಖಲು ಮಾಡಿದ್ದಲ್ಲಿ, ಅವರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳೇನು; | ಅಂಗವಿಕಲ / ವಿಕಲಚೇತನ ಹೊಂದಿರುವ ಮಕ್ಕಳಿಗೆ ಶಿಕ್ಷಣಕ್ಕೆ ಸಂಬಂಧಿದಂತೆ ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳು ಈ ಕೆಳಕಂಡಂತಿವೆ.<br>1. ವಿದ್ಯಾರ್ಥಿವೇತನ.<br>2. ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಬಹುಮಾನ ಯೋಜನೆ.<br>3. ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ.<br>4. ಎಸ್.ಎಸ್.ಎಲ್.ಸಿ ಹಾಗೂ ನಂತರದ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್-ಟಾಪ್. |
| ಈ | ಪ್ರಸಕ್ತ ಸಾಲಿಗೆ ಅನುದಾನ ಬಿಡುಗಡೆಯಾಗಿದೆಯೇ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಹೌದು. ಆಯವ್ಯಯವನ್ನು ಯೋಜನೆ ಅನುಸಾರ ಜಿಲ್ಲಾವಾರು ಬಿಡುಗಡೆ ಮಾಡಲಾಗುವುದು ಪ್ರಸಕ್ತ ಸಾಲಿನಲ್ಲಿ ಬಿಡುಗಡೆಯಾದ ಆಯವ್ಯಯದ ವಿವರಗಳನ್ನು ಅನುಬಂಧ – 02ರಲ್ಲಿ ನೀಡಲಾಗಿದೆ. |

| | | |
|---|---|---|
| ಉ | ಅಂಗವಿಕಲ / ವಿಕಲಚೇತನ ಹೊಂದಿರುವ ಮಕ್ಕಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು: ಇವುಗಳನ್ನು ಮಕ್ಕಳಿಗೆ ತಲುಪಿಸಲು ಸರ್ಕಾರ ಯಾವ ರೀತಿಯ ಯೋಜನೆಗಳನ್ನು ಹಮ್ಮಿಕೊಂಡಿದೆ? | ವಿಕಲಚೇತನ ಹೊಂದಿರುವ ಮಕ್ಕಳಿಗೆ ಸರ್ಕಾರದಿಂದ ವಿದ್ಯಾರ್ಥಿವೇತನ ಮತ್ತು ಪ್ರೋತ್ಸಾಹಧನ, ಶುಲ್ಕಮರುಪಾವತಿ, ಶಿಶುಕೇಂದ್ರಿಕೃತ ಯೋಜನೆಯಡಿ ವಿಶೇಷ ಶಾಲೆಗಳು, 1982ರಡಿ ರಾಜ್ಯ ಅನುದಾನ ಸಂಹಿತೆಯಡಿ ವಿಶೇಷ ಶಾಲೆಗಳು, ಸರ್ಕಾರದ ವತಿಯಿಂದ ನಡೆಯುತ್ತಿರುವ ವಿಶೇಷ ಶಾಲೆಗಳು ಮತ್ತು ಎಸ್.ಎಸ್.ಎಲ್.ಸಿ ನಂತರ ಓದುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಸೌಲಭ್ಯಗಳನ್ನು ನೀಡಲಾಗುತ್ತಿದೆ. |
| | | ಸರ್ಕಾರದಿಂದ ವಿಕಲಚೇತನ ಮಕ್ಕಳಿಗೆ ಸಿಗುವ ಯೋಜನೆಗಳನ್ನು ತಲುಪಿಸಲು ಪತ್ರಿಕಾ ಪ್ರಕಟಣೆ ಮೂಲಕ, ಕರಪತ್ರ ಹಂಚುವಿಕೆ, ಇಲಾಖಾ ವೆಬ್-ಸೈಟ್ ಮೂಲಕ ಗ್ರಾಮೀಣ ಹಂತದಲ್ಲಿರುವ ಮಕ್ಕಳಿಗೆ ತಲುಪಿಸಲು ಇಲಾಖೆಯಲ್ಲಿ ಗೌರವಧನದ ಆಧಾರದ ಮೇಲೆ ನೇಮಕ ಮಾಡಿಕೊಂಡಿರುವ ವಿ.ಆರ್.ಡಬ್ಲ್ಯೂ / ಎಂ.ಆರ್.ಡಬ್ಲ್ಯೂಗಳ ಮೂಲಕ, ಅರಿವಿನ ಸಿಂಚನ ಯೋಜನೆಗಳನ್ನು ಹಮ್ಮಿಕೊಂಡಿದೆ. |

**ಸಂಖ್ಯೆ: ಮಮಇ 242 ಪಿಹೆಚ್‌ಪಿ 2018**

(ಡಾ|| ಜಯಮಾಲ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ,
ಹಿರಿಯ ನಾಗರೀಕರ ಸಬಲೀಕರಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.

**ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:105ಕ್ಕೆ ಅನುಬಂಧ-01**

**ವಿಕಲಚೇತನ ಮಕ್ಕಳಿಗೆ ಇಲಾಖಾ ಯೋಜನೆಗಳು**

- **ಸರ್ಕಾರಿ ವಸತಿಯುತ ಶಾಲೆಗಳು:**

  ಇಲಾಖೆಯಡಿ 4 ಅಂಧ ಮಕ್ಕಳ ವಸತಿ ಶಾಲೆಗಳು ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ಮತ್ತು 05 ಶ್ರವಣದೋಷವುಳ್ಳ ವಸತಿ ಶಾಲೆಗಳನ್ನು ಬೆಂಗಳೂರು, ಮೈಸೂರು, ಬೆಳಗಾವಿ, ಕಲಬುರ್ಗಿ, ಬಳ್ಳಾರಿ ಜಿಲ್ಲೆಗಳಲ್ಲಿ ನಡೆಸಲಾಗುತ್ತಿದೆ ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. **ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ ಹಾಗೂ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.**

- **ಅನುದಾನ ಸಂಹಿತ 1982ರಡಿ ನಡೆಸಲಾಗುತ್ತಿರುವ ವಿಶೇಷ ಶಾಲೆಗಳು**

  1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

- **ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:**

  ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರೆಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 141 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

- ಕೇಂದ್ರ ಸರ್ಕಾರದ ದೀನ್‌ದಯಾಳ್ ಪುನರ್ವಸತಿ ಯೋಜನೆಯಡಿ 03 ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಶೇಷ ಶಾಲೆ /ವೃತ್ತಿ ತರಬೇತಿ ಕೇಂದ್ರಗಳು ನಡೆಯುತ್ತಿದ್ದು, ಸದರಿ ಶಾಲೆ ಹಾಗೂ ತರಬೇತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.೯೦ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.

- **ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹನ ಧನ:**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಮಂಜೂರು ಮಾಡಲಾಗುತ್ತಿದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ. ಪ್ರಸ್ತುತ ನೀಡಲಾಗುತ್ತಿರುವ ತರಗತಿವಾರು ವಿದ್ಯಾರ್ಥಿ ವೇತನದ ವಿವರ ಈ ಕೆಳಕಂಡಂತಿದೆ;

| ಕ್ರ.ಸಂ | ವಿಕಲಚೇತನ ವಿದ್ಯಾರ್ಥಿಗಳಿಗೆ | ವಿದ್ಯಾರ್ಥಿ ವೇತನ (ಮಾಹೆಯಾನ) |
|---|---|---|
| 1 | 1 ರಿಂದ 5ನೇ ತರಗತಿ | 100/- |
| 2 | 6ರಿಂದ 10ನೇ ತರಗತಿ | 200/- |
| 3 | ಪಿ.ಯು.ಸಿ | 300/- |
| 4 | ಬಿ.ಎ/ಬಿ.ಎಸ್ಸಿ,/ಬಿ.ಕಾಂ, ಇತರೆ ಪದವೀಧರರು ಹಾಗೂ ಟಿ.ಸಿ.ಹೆಚ್/ತತ್ಸಮಾನ | 400/- |
| 5 | ಬಿ.ಇ./ಬಿ.ಟೆಕ್,/ಎಂ.ಬಿ.ಬಿ.ಎಸ್, ಎಲ್.ಎಲ್.ಬಿ/ ಡಿಪ್ಲೋಮಾ ಇನ್ ಪ್ರೋಫೆಷನ್ ಮತ್ತು ಇಂಜನಿಯರಿಂಗ್ ಇನ್ ಪ್ಲ್ಯಾಂಟ್ ಟ್ರೈನಿಂಗ್. | 500/- |
| 6 | ಎಂ.ಎ, ಎಂ.ಎಸ್ಸಿ, ಎಂ.ಕಾಂ. ಎಲ್.ಎಲ್.ಎಂ ಹಾಗೂ ತತ್ಸಮಾನ | 600/- |

- **ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.

| ಕ್ರಸಂ | ತರಗತಿಗಳು | ನೀಡುತ್ತಿರುವ ಪ್ರೋತ್ಸಾಹ ಧನ |
|---|---|---|
| 1 | ಎಸ್.ಎಸ್.ಎಲ್.ಸಿ | 3000/- |
| 2 | ಪದವಿ ಪೂರ್ವ ಶಿಕ್ಷಣ | 5000/- |
| 3 | ಪದವಿ / ಟಿ.ಸಿ.ಹೆಚ್ | 8000/- |
| 4 | ಬಿ.ಇಡಿ / ಸ್ನಾತಕೋತ್ತರ ಪದವಿ / ಎಂ.ಎ. ಎಂ.ಕಾಂ./ಎಂ.ಎಸ್ಸಿ ಹಾಗೂ ಪದವಿ ನಂತರ 2 ವರ್ಷಗಳ ಕೋರ್ಸ್‌ಗೆ | 10000/- |
| 5 | ಕೃಷಿ ಪದವಿ / ಇಂಜನೀಯರಿಂಗ್ / ಪಶು ವೈದ್ಯಕೀಯ / ಎಂ.ಇಡಿ ವೈದ್ಯಕೀಯ ಪದವಿ | 12000/- |

- **ಬ್ರೈಲ್ ಮುದ್ರಣಾಲಯ:**

ದೃಷ್ಟಿದೋಷವುಳ್ಳ ಮಕ್ಕಳಿಗೆ ಬೇಕಾಗುವ ಬ್ರೈಲ್ ಪುಸ್ತಕಗಳನ್ನು ಮುದ್ರಿಸಿ ಸಂಬಂಧಪಟ್ಟ ಅಂಧರ ಶಾಲೆಗಳಿಗೆ ಮೈಸೂರಿನಲ್ಲಿರುವ ಬ್ರೈಲ್ ಮುದ್ರಣಾಲಯದ ಮೂಲಕ ಉಚಿತವಾಗಿ ಸರಬರಾಜು ಮಾಡಲಾಗುತ್ತಿದೆ. 2017-18ನೇ ಸಾಲಿನಲ್ಲಿ 15500 ಪುಸ್ತಕಗಳನ್ನು ಬಾಹ್ಯ ಸಂಸ್ಥೆಯಿಂದ ಮುದ್ರಿಸಿ ಅಂಧ ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ.

- **ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :**

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

- **ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:**

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ ಮೂರರಿಂದ 16 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ. 10,000/-ಗಳಂತೆ ವಾರ್ಷಿಕ 25.00 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

- **ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯಾಗಿದ್ದು, ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ. ವೈದ್ಯಕೀಯ ಮಂಡಳಿಯವರು ಶಿಫಾರಸ್ಸು ಮಾಡಿರುವ ವಿಕಲಚೇತನ ಅಭ್ಯರ್ಥಿಗಳು ಮಾತ್ರ ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾಗಿರುತ್ತಾರೆ.

- **ವಿಶೇಷ ಶಿಕ್ಷಣ ತರಬೇತಿ ಕೇಂದ್ರ :**

ದೃಷ್ಟಿದೋಷವುಳ್ಳ ಹಾಗೂ ಶ್ರವಣದೋಷವುಳ್ಳ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರಿಗೆ ವಿಶೇಷ ಶಿಕ್ಷಣ ನೀಡಲು ತಲಾ ಒಂದರಂತೆ ವಿಶೇಷ ಶಿಕ್ಷಕರ ತರಬೇತಿ ಕೇಂದ್ರವನ್ನು ಮೈಸೂರಿನಲ್ಲಿ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಂದಿಗೆ ತರಬೇತಿಯನ್ನು ನೀಡಲು ಅವಕಾಶವಿರುತ್ತದೆ.

****

ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:105ಕ್ಕೆ ಅನುಬಂಧ-02

ವಿದ್ಯಾರ್ಥಿ ವೇತನ ಹಾಗೂ ಪ್ರೋತ್ಸಾಹಧನ ಯೋಜನೆಯಡಿ 2018-19ನೇ ಸಾಲಿನಲ್ಲಿ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಆಯವ್ಯಯದ ವಿವರ

| ಕ್ರ. ಸಂ | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿರುವ ಆಯವ್ಯಯ (ರೂ. ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು ನಗರ | 20.40 |
| 2 | ಬೆಂಗಳೂರು ಗ್ರಾಮಾಂತರ | 5.20 |
| 3 | ಬೆಳಗಾವಿ | 17.35 |
| 4 | ಬಳ್ಳಾರಿ | 5.85 |
| 5 | ಬೀದರ್ | 6.50 |
| 6 | ವಿಜಯಪುರ | 19.00 |
| 7 | ಬಾಗಲಕೋಟೆ | 6.95 |
| 8 | ಚಿತ್ರದುರ್ಗ | 14.90 |
| 9 | ಚಿಕ್ಕಮಗಳೂರು | 7.60 |
| 10 | ಚಾಮರಾಜನಗರ | 11.70 |
| 11 | ಧಾರವಾಡ | 21.45 |
| 12 | ದಕ್ಷಿಣ ಕನ್ನಡ | 13.85 |
| 13 | ದಾವಣಗೆರೆ | 19.07 |
| 14 | ಕಲಬುರಗಿ | 31.40 |
| 15 | ಗದಗ | 14.45 |
| 16 | ಹಾಸನ | 14.70 |
| 17 | ಹಾವೇರಿ | 27.25 |
| 18 | ಕೊಡಗು | 3.35 |
| 19 | ಕೋಲಾರ | 9.45 |
| 20 | ಕೊಪ್ಪಳ | 10.30 |
| 21 | ಮೈಸೂರು | 33.50 |
| 22 | ಮಂಡ್ಯ | 10.95 |
| 23 | ರಾಯಚೂರು | 9.65 |
| 24 | ಶಿವಮೊಗ್ಗ | 32.95 |
| 25 | ತುಮಕೂರು | 39.15 |
| 26 | ಉತ್ತರಕನ್ನಡ | 7.78 |
| 27 | ಉಡುಪಿ | 4.50 |
| 28 | ರಾಮನಗರ | 15.10 |
| 29 | ಚಿಕ್ಕಬಳ್ಳಾಪುರ | 3.30 |
| 30 | ಯಾದಗಿರಿ | 9.30 |
| | ಒಟ್ಟು ರೂ. | 447.00 |

**ಶುಲ್ಕ ಮರುಪಾವತಿ ಯೋಜನೆಯಡಿ 2018-19ನೇ ಸಾಲಿನಲ್ಲಿ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಆಯವ್ಯಯದ ವಿವರ**

| ಕ್ರ. ಸಂ | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿರುವ ಆಯವ್ಯಯ (ರೂ. ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು ನಗರ | 6.50 |
| 2 | ಬೆಂಗಳೂರು ಗ್ರಾಮಾಂತರ | 0.50 |
| 3 | ಬೆಳಗಾವಿ | 0.50 |
| 4 | ಬಳ್ಳಾರಿ | 1.00 |
| 5 | ಬೀದರ್ | 2.50 |
| 6 | ವಿಜಯಪುರ | 4.26 |
| 7 | ಬಾಗಲಕೋಟೆ | 2.00 |
| 8 | ಚಿತ್ರದುರ್ಗ | 0.30 |
| 9 | ಚಿಕ್ಕಮಗಳೂರು | 2.50 |
| 10 | ಚಾಮರಾಜನಗರ | 1.70 |
| 11 | ಧಾರವಾಡ | 4.00 |
| 12 | ದಕ್ಷಿಣ ಕನ್ನಡ | 2.00 |
| 13 | ದಾವಣಗೆರೆ | 0.56 |
| 14 | ಕಲಬುರಗಿ | 13.50 |
| 15 | ಗದಗ | 1.05 |
| 16 | ಹಾಸನ | 2.75 |
| 17 | ಹಾವೇರಿ | 11.95 |
| 18 | ಕೊಡಗು | 0.25 |
| 19 | ಕೋಲಾರ | 1.00 |
| 20 | ಕೊಪ್ಪಳ | 0.70 |
| 21 | ಮೈಸೂರು | 19.00 |
| 22 | ಮಂಡ್ಯ | 2.50 |
| 23 | ರಾಯಚೂರು | 5.37 |
| 24 | ಶಿವಮೊಗ್ಗ | 17.00 |
| 25 | ತುಮಕೂರು | 2.00 |
| 26 | ಉತ್ತರಕನ್ನಡ | 1.50 |
| 27 | ಉಡುಪಿ | 1.00 |
| 28 | ರಾಮನಗರ | 1.00 |
| 29 | ಚಿಕ್ಕಬಳ್ಳಾಪುರ | 1.00 |
| 30 | ಯಾದಗಿರಿ | 4.60 |
| | **ಒಟ್ಟು ರೂ.** | **114.49** |

**ಶಿಶು ಕೇಂದ್ರಿಕೃತ ಯೋಜನೆಯಡಿ 2018-19ನೇ ಸಾಲಿನಲ್ಲಿ ಜಿಲ್ಲೆಗಳಿಗೆ ಬಿಡುಗಡೆ ಮಾಡಿರುವ ಆಯವ್ಯಯದ ವಿವರ**

| ಕ್ರ. ಸಂ | ಜಿಲ್ಲೆಯ ಹೆಸರು | ಬಿಡುಗಡೆ ಮಾಡಿರುವ ಆಯವ್ಯಯ (ರೂ. ಲಕ್ಷಗಳಲ್ಲಿ) |
|---|---|---|
| 1 | ಬೆಂಗಳೂರು ನಗರ | 430.35 |
| 2 | ಬೆಂಗಳೂರು ಗ್ರಾಮಾಂತರ | 52.48 |
| 3 | ಬೆಳಗಾವಿ | 111.32 |
| 4 | ಬಳ್ಳಾರಿ | 34.00 |
| 5 | ಬೀದರ್ | 119.90 |
| 6 | ವಿಜಯಪುರ | 20.22 |
| 7 | ಬಾಗಲಕೋಟೆ | 45.97 |
| 8 | ಚಿತ್ರದುರ್ಗ | 44.02 |
| 9 | ಚಿಕ್ಕಮಗಳೂರು | 54.46 |
| 10 | ಚಾಮರಾಜನಗರ | 0.00 |
| 11 | ಧಾರವಾಡ | 162.83 |
| 12 | ದಕ್ಷಿಣ ಕನ್ನಡ | 82.64 |
| 13 | ದಾವಣಗೆರೆ | 148.94 |
| 14 | ಕಲಬುರಗಿ | 57.01 |
| 15 | ಗದಗ | 95.74 |
| 16 | ಹಾಸನ | 10.69 |
| 17 | ಹಾವೇರಿ | 172.18 |
| 18 | ಕೊಡಗು | 10.51 |
| 19 | ಕೋಲಾರ | 68.93 |
| 20 | ಕೊಪ್ಪಳ | 18.07 |
| 21 | ಮೈಸೂರು | 125.61 |
| 22 | ಮಂಡ್ಯ | 115.82 |
| 23 | ರಾಯಚೂರು | 37.78 |
| 24 | ಶಿವಮೊಗ್ಗ | 33.14 |
| 25 | ತುಮಕೂರು | 78.87 |
| 26 | ಉತ್ತರಕನ್ನಡ | 45.54 |
| 27 | ಉಡುಪಿ | 42.18 |
| 28 | ರಾಮನಗರ | 49.56 |
| 29 | ಚಿಕ್ಕಬಳ್ಳಾಪುರ | 19.38 |
| 30 | ಯಾದಗಿರಿ | 0.00 |
| | **ಒಟ್ಟು ರೂ.** | **2288.14** |

****